# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 18-03-2021 ಪ್ರಶ್ನೆ ಸಂಖ್ಯೆ : 1386(1592)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಎ. ತಿಪ್ಪೇಸ್ವಾಮಿ(ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾದ ದಿನಾಂಕ : 18-03-2021

ಉತ್ತರಿಸುವ ಸಚಿವರು: ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ಯೋಜನಾ ಸಚಿವರು

ವಿಷಯ : 2011 ಜಾತಿ ಅಂಕಿ-ಅಂಶಗಳ ಜನಗಣತಿ ಬಗ್ಗೆ

(ಅ) ರಾಜ್ಯದಲ್ಲಿ ಕೇಂದ್ರ ಸರ್ಕಾರ 2021 - ಜನಗಣತಿಯನ್ನು ಕೈಗೆತ್ತಿಕೊಳ್ಳಲು ಸೂಚನೆ ಹೊರಡಿಸಿದೆಯೇ; (ವಿವರ ನೀಡುವುದು)

(ಆ) ರಾಜ್ಯ ಸರ್ಕಾರ 2021 ಜನಗಣತಿ ಅಂಗವಾಗಿ ಸಿದ್ಧಪಡಿಸಲಾಗುವ "ರಾಷ್ಟ್ರೀಯ ಜನಸಂಖ್ಯಾ ರಿಜಿಸ್ಟ್ರಾರ್" ಬಗ್ಗೆ ವಿಧಾನ ಮತ್ತು ಮಾರ್ಗದರ್ಶನಗಳನ್ನು ಕೇಂದ್ರ ಸರ್ಕಾರದ ನಿರ್ದೇಶನದಂತೆ ರೂಪಿಸಿ, ಅಂತಿಮಗೊಳಿಸಲಾಗಿದೆಯೇ; (ವಿವರ ನೀಡುವುದು)

(ಇ) 2011 - ಜನಗಣತಿಯಲ್ಲಿ ಸಂಗ್ರಹವಾದ ಜಾತಿ ಅಂಕಿ-ಅಂಶಗಳನ್ನು ಬಿಡುಗಡೆ ಮಾಡಲಾಗಿದೆಯೇ; ಮತ್ತು 2021-ಜನಗಣತಿ ಅವಧಿಯಲ್ಲಿ ಜಾತಿ ಆಧಾರಿತ ಕುಟುಂಬಗಳ ಸಾಮಾಜಿಕ - ಆರ್ಥಿಕ ಗಣತಿ ನಡೆಸಲು ಉದ್ದೇಶಿಸಲಾಗಿದೆಯೇ; (ಸಂಪೂರ್ಣ ವಿವರ ನೀಡುವುದು)

(ಈ) 2021-ಜನಗಣತಿಯಲ್ಲಿ ಮೊಟ್ಟಮೊದಲನೆಯದಾಗಿ Digital Census ನಡೆಸಲು ಉದ್ದೇಶಿಸಲಾಗಿದ್ದು, ಈ ಕಾರ್ಯಕ್ರಮ ಜಾರಿಗೆ ತರಲು ರಾಜ್ಯ ಸರ್ಕಾರಕ್ಕೆ ಕೇಂದ್ರ ಸರ್ಕಾರ ವಿವಿಧ ಕಾರ್ಯಕ್ರಮಗಳ ಅಡಿಯಲ್ಲಿ ಬಿಡುಗಡೆ ಮಾಡಿದ ಅನುದಾನವೆಷ್ಟು ಮತ್ತು ಇದರಲ್ಲಿ ಉಪಯೋಗಿಸಲಾದ ಹಣ ಎಷ್ಟು? (ವಿವರ ನೀಡುವುದು)